# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 300 (2348) |
| ಸದಸ್ಯರ ಹೆಸರು | ಡಾ॥ ಚಂದ್ರಶೇಖರ್ ಬಿ.ಪಾಟೀಲ್ (ಪದವೀಧರರ ಕ್ಷೇತ್ರ) |
| ಉತ್ತರಿಸುವ ದಿನಾಂಕ | 21-03-2022 |
| ಉತ್ತರಿಸುವ ಸಚಿವರು | ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಬೀದರ್ ಜಿಲ್ಲೆ ಔರಾದ್ ತಾಲ್ಲೂಕಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಹೊಸ ಕಟ್ಟಡಕ್ಕೆ ಸ್ಥಳಾಂತರಗೊಂಡ ನಂತರ ವಿದ್ಯಾರ್ಥಿಗಳಿಗೆ ಕಾಲೇಜಿಗೆ ಹೋಗಲು ಹಾಗೂ ಕಾಲೇಜಿನಲ್ಲಿ ಲೈಬ್ರರಿ, ಕ್ಲಾಸ್ ರೂಂ/ಆಟದ ಮೈದಾನ ಇಲ್ಲದಿರುವುದರಿಂದ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ |
| (ಆ) | ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು? | ಸದರಿ ಕಾಲೇಜು ಈಗಾಗಲೇ 08 ತರಗತಿ ಕೊಠಡಿಗಳು, 02 ಪ್ರಯೋಗಾಲಯ, 04 ಶೌಚಾಲಯ ಮತ್ತು 01 ವಿಶ್ರಾಂತಿ ಗೃಹವನ್ನೊಳಗೊಂಡ ಸ್ವಂತ ಕಟ್ಟಡ ಹೊಂದಿರುತ್ತದೆ.<br><br>ತರಗತಿ ಕೊಠಡಿಗಳ ನಿರ್ಮಾಣಕ್ಕಾಗಿ 2016-17ನೇ ಆರ್ಥಿಕ ವರ್ಷದಲ್ಲಿ ವಿಶೇಷ ಅಭಿವೃದ್ಧಿ ಯೋಜನೆಯಡಿ ರೂ.100.00 ಲಕ್ಷಗಳ ಅಂದಾಜು ಮೊತ್ತದಲ್ಲಿ ಕಾಮಗಾರಿ ನಿರ್ವಹಿಸಲು ಕ್ರಮ ಕೈಗೊಳ್ಳಲಾಗಿದ್ದು, ದಿನಾಂಕ:10.03.2022ರಂದು ನಿವೇಶನ ಹಸ್ತಾಂತರಿಸಲಾಗಿದ್ದು, ಸದ್ಯದಲ್ಲಿಯೇ ಕಾಮಗಾರಿ ಹಸ್ತಾಂತರಿಸಲಾಗುತ್ತದೆ.<br><br>ಸದರಿ ಕಾಲೇಜಿಗೆ 2020-21ನೇ ಆರ್ಥಿಕ ವರ್ಷದ ಸಾಮಾನ್ಯ ಯೋಜನೆಯಡಿ ರೂ.50.00 ಲಕ್ಷಗಳ ಅಂದಾಜು ಮೊತ್ತದಲ್ಲಿ ಗ್ರಂಥಾಲಯವನ್ನು ನಿರ್ಮಿಸಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ. ಕಾಮಗಾರಿಯ ಟೆಂಡರ್ ಅಂತಿಮಗೊಳಿಸಿ ದಿನಾಂಕ:08.02.2022ರಂದು ಕಾರ್ಯದೇಶ ನೀಡಲಾಗಿದೆ. |

| | | |
|---|---|---|
| | | ಇದಲ್ಲದೆ 2021-22ನೇ ಆರ್ಥಿಕ ಸಾಲಿನ ವಿಶೇಷ ಅಭಿವೃದ್ಧಿ ಯೋಜನೆಯಡಿಯಲ್ಲಿ ರೂ.200.00 ಲಕ್ಷಗಳ ಕ್ರಿಯಾ ಯೋಜನೆ ಅನುಮೋದನೆಗೊಂಡಿದ್ದು, ಶೀಘ್ರ ಕಟ್ಟಡ ನಿರ್ಮಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು. |
| | | ಸದರಿ ಕಾಲೇಜು 3.32 ಎಕರೆಗಳಲ್ಲಿ ಸಮತಟ್ಟಾದ ಜಮೀನು ಹೊಂದಿದ್ದು, ಆಟದ ಮೈದಾನವನ್ನು ಸಹ ಒಳಗೊಂಡಿರುತ್ತದೆ. |

ಕಡತ ಸಂಖ್ಯೆ: ಇಡಿ 93 ಪಿಜಿಪಿಸಿ 2022

(ಡಾ: ಅಶ್ವಥ್ ನಾರಾಯಣ ಸಿ.ಎನ್)
ಉನ್ನತ ಶಿಕ್ಷಣ, ಮಾಹಿತಿ ತಂತ್ರಜ್ಞಾನ ಮತ್ತು
ಜೈವಿಕ ತಂತ್ರಜ್ಞಾನ, ವಿಜ್ಞಾನ ಮತ್ತು
ತಂತ್ರಜ್ಞಾನ ಹಾಗೂ ಕೌಶಲ್ಯಾಭಿವೃದ್ಧಿ ಸಚಿವರು